# ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು- 560001

ದಿನಾಂಕ: 25-01-2018

ಸಂಖ್ಯೆ: ಸಿ7(2)/ಪ್ರಾಶಿಅ/ಕ.ಭಾ 64 /2017-18

**<u>ಸುತ್ತೋಲೆ</u>**

ವಿಷಯ: ಕನ್ನಡ ಭಾಷಾ ಕಲಿಕಾ ಅಧಿನಿಯಮ-2015 ರಡಿ ರಚಿಸಲಾದ ಕನ್ನಡ ಭಾಷಾ ಕಲಿಕೆ ನಿಯಮಗಳು-2017 ಅನ್ನು ಸಮಗ್ರವಾಗಿ ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ: 1] ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 240 ಪಿಜಿಸಿ 2017 ದಿನಾಂಕ: 10-05-2017.
2] ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 274 ಪಿಜಿಸಿ 2017 ದಿನಾಂಕ: 21-10-2017.
3] ಈ ಕಛೇರಿ ಪತ್ರ ಸಂಖ್ಯೆ: ಸಿ7(2)/ಪ್ರಾಶಿಅ/ಕ.ಭಾ.ಕ.ಅ 01/2017-18 ದಿನಾಂಕ: 24-10-2017

*******************

ಕನ್ನಡ ಭಾಷಾ ಕಲಿಕಾ ಅಧಿನಿಯಮ-2015 (2015-ರ ಕರ್ನಾಟಕ ಅಧಿನಿಯಮ-22)ರ ಕಲಂ-3ರಲ್ಲಿ ರಾಜ್ಯದಲ್ಲಿನ ಎಲ್ಲಾ ಶಾಲೆಗಳಲ್ಲಿ, ಎಲ್ಲಾ ತರಗತಿಗಳಲ್ಲಿ ಪ್ರಥಮ ಭಾಷೆಯಾಗಿ ಆಗಲೀ ಅಥವಾ ದ್ವಿತೀಯ ಭಾಷೆಯಾಗಿ ಆಗಲೀ ಕನ್ನಡ ಭಾಷೆಯನ್ನು ಕಡ್ಡಾಯ ಭಾಷೆಯನ್ನಾಗಿ ಹಂತಹಂತವಾಗಿ ಕಲಿಸತಕ್ಕದ್ದು ಎಂದು ತಿಳಿಸಲಾಗಿದೆ.

ಸದರಿ ಅಧಿನಿಯಮದಡಿ ಉಲ್ಲೇಖ-(2)ರ ಸರ್ಕಾರದ ಅಧಿಸೂಚನೆಯಂತೆ ಕನ್ನಡ ಭಾಷಾ ಕಲಿಕೆ ನಿಯಮಗಳು-2017ಅನ್ನು ರಚಿಸಲಾಗಿ 2017-18ನೇ ಶೈಕ್ಷಣಿಕ ವರ್ಷದಿಂದ ಕನ್ನಡವನ್ನು ಪ್ರಥಮ ಅಥವ ದ್ವಿತೀಯ ಭಾಷೆಯನ್ನಾಗಿ ಕಲಿಸುವುದನ್ನು ಆರಂಭಿಸತಕ್ಕದ್ದು ಹಾಗೂ 2018-19ನೇ ಶೈಕ್ಷಣಿಕ ವರ್ಷದಲ್ಲಿ 1ನೇ ಮತ್ತು 2ನೇ ತರಗತಿಗಳಲ್ಲಿ ಹಾಗೂ ಇದೇ ರೀತಿ ಹತ್ತನೇ ತರಗತಿಯವರೆಗೆ ಕನ್ನಡ ಭಾಷಾ ಕಲಿಕೆಯನ್ನು ಹಂತ ಹಂತವಾಗಿ ವಿಸ್ತರಿಸತಕ್ಕದ್ದು ಎಂದು ತಿಳಿಸಲಾಗಿದೆ. ಈಗಾಗಲೇ ಈ ಸಂಬಂಧ ಉಲ್ಲೇಖ-3ರ ಪತ್ರದನ್ವಯ ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಕನ್ನಡ ಭಾಷಾ ಕಲಿಕೆ ನಿಯಮಗಳು-2017 ರಂತೆ ಕ್ರಮವಹಿಸಲು ಸೂಚನೆ ನೀಡಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 240 ಪಿಜಿಸಿ 2017 ದಿನಾಂಕ: 10-05-2017ರಲ್ಲಿ ಮೇಲ್ಕಂಡ ಅಧಿನಿಯಮದಲ್ಲಿ ಪ್ರಸ್ತಾಪಿಸಿರುವಂತೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಹಂತ ಹಂತವಾಗಿ ಕನ್ನಡ ಭಾಷೆಯನ್ನು ಪ್ರಥಮ ಭಾಷೆ ಅಥವಾ ದ್ವಿತೀಯ ಭಾಷೆಯಾಗಿ ಕಡ್ಡಾಯವಾಗಿ ಬೋಧಿಸುವುದನ್ನು ಖಚಿತ ಪಡಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಸಕ್ಷಮ ಪ್ರಾಧಿಕಾರಿಗಳ ವಿವರ ಕೆಳಕಂಡಂತಿದೆ.

1] ಪ್ರತಿಯೊಂದು ಶೈಕ್ಷಣಿಕ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಆಯಾ ಶೈಕ್ಷಣಿಕ ಜಿಲ್ಲೆಗಳಲ್ಲಿ ಇರುವ ಪ್ರಾಥಮಿಕ ಶಾಲೆಗಳಿಗೆ.
2] ನಿರ್ದೇಶಕರು (ಪ್ರೌಢಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರನ್ನು ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿರುವ ಎಲ್ಲಾ ಪ್ರೌಢಶಾಲೆಗಳಿಗೆ.
3] ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ, ಇವರನ್ನು ಕಲಬುರಗಿ ವಿಭಾಗದಲ್ಲಿರುವ ಎಲ್ಲಾ ಪ್ರೌಢಶಾಲೆಗಳಿಗೆ.
4] ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ, ಇವರನ್ನು ಧಾರವಾಡ ವಿಭಾಗದಲ್ಲಿರುವ ಎಲ್ಲಾ ಪ್ರೌಢಶಾಲೆಗಳಿಗೆ.

ಕನ್ನಡ ಭಾಷಾ ಕಲಿಕೆ ನಿಯಮಗಳು-2017ಅನ್ನು ಸಮಗ್ರವಾಗಿ ಅನುಷ್ಠಾನಗೊಳಿಸುವ ಹಿನ್ನೆಲೆಯಲ್ಲಿ ಎಲ್ಲಾ ಪಠ್ಯಕ್ರಮದ ಶಾಲೆಗಳಿಗೂ (ಸಿ.ಬಿ.ಎಸ್.ಇ/ ಐ.ಸಿ.ಎಸ್.ಇ/ ಇತರೆ ಮಂಡಳಿಗಳಿಂದ ಸಂಯೋಜನೆ ಪಡೆದ

ಶಾಲೆಗಳನ್ನು ಒಳಗೊಂಡಂತೆ) ಪ್ರಥಮ ಹಾಗೂ ದ್ವಿತೀಯ ಭಾಷೆ ಕನ್ನಡ ಪಠ್ಯ ಪುಸ್ತಕಗಳನ್ನು ಶಾಲಾ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಾಲಾ ಮುಖ್ಯಸ್ಥರು ನೀಡುವ ಪಠ್ಯಪುಸ್ತಕಗಳ ಬೇಡಿಕೆ ಪಟ್ಟಿಯಂತೆ 2018–19ನೇ ಶೈಕ್ಷಣಿಕ ಸಾಲಿಗೆ ಒದಗಿಸಬೇಕಾಗಿರುತ್ತದೆ.

ಸಿ.ಬಿ.ಎಸ್.ಇ/ಐ.ಸಿ.ಎಸ್.ಇ/ ಇತರೆ ಮಂಡಳಿಗಳಿಂದ ಸಂಯೋಜನೆ ಪಡೆದ ಶಾಲೆಗಳೂ ಸೇರಿದಂತೆ ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಎಲ್ಲಾ ಶಾಲಾ ಮುಖ್ಯಸ್ಥರು SATS ತಂತ್ರಾಂಶದಲ್ಲಿ ವಿದ್ಯಾರ್ಥಿಯು ಅಪೇಕ್ಷಿಸುವ ಪ್ರಥಮ ಅಥವಾ ದ್ವಿತೀಯ ಭಾಷೆ ಕನ್ನಡವನ್ನು ನಮೂದಿಸಿ ಕನ್ನಡ ಭಾಷಾ ಪಠ್ಯಪುಸ್ತಕದ ಬೇಡಿಕೆಯನ್ನು ಖಚಿತ ಪಡಿಸುವುದು. ಈ ಸಂಬಂಧ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪರಿಶೀಲಿಸಿ ರಾಜ್ಯ ಪಠ್ಯಪುಸ್ತಕ ಸಂಘಕ್ಕೆ ನಿಖರ ಮಾಹಿತಿಯನ್ನು ಸಲ್ಲಿಸಲು ವ್ಯವಸ್ಥೆ ಮಾಡುವುದು.

ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿರುವ ಸಿ.ಬಿ.ಎಸ್.ಇ/ ಐ.ಸಿ.ಎಸ್.ಇ / ಇತರೆ ಮಂಡಳಿಗಳಿಂದ ಸಂಯೋಜನೆ ಪಡೆದ ಶಾಲೆಗಳೂ ಸೇರಿದಂತೆ ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಎಲ್ಲಾ ಶಾಲೆಗಳಿಂದ ಕನ್ನಡ ಪ್ರಥಮ ಅಥವಾ ದ್ವಿತೀಯ ಭಾಷೆಗಳ ನಿಗಧಿತ ಪಠ್ಯಪುಸ್ತಕದ ಬೇಡಿಕೆ ಮಾಹಿತಿಯನ್ನು SATS ತಂತ್ರಾಂಶದಲ್ಲಿ ಅಳವಡಿಸಿರುವ ಬಗ್ಗೆ ಖಚಿತ ಪಡಿಸಿಕೊಂಡು ದಿನಾಂಕ: 10–02–2018ರೊಳಗಾಗಿ ಈ ಕಛೇರಿಗೆ ವರದಿ ಸಲ್ಲಿಸುವುದು. ಮುಂದುವರೆದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪಠ್ಯ ಪುಸ್ತಕ ಸಂಘ, ಬೆಂಗಳೂರು ರವರು ರಾಜ್ಯದ ಎಲ್ಲಾ ಶಾಲೆಗಳ ಕ್ರೋಢೀಕೃತ SATS ಮಾಹಿತಿಯನ್ನು ಪಡೆದು ಕ್ರಮವಹಿಸತಕ್ಕದ್ದು. ಸದರಿ ಕ್ರಮದ ಬಗ್ಗೆ ದಿನಾಂಕ: 12–02–2018ರೊಳಗಾಗಿ ಎಲ್ಲಾ ಉಪನಿರ್ದೇಶಕರುಗಳು, ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ರವರಿಗೆ ವರದಿ ಸಲ್ಲಿಸುವುದು.

ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಶಾಲೆಗಳಲ್ಲಿ 2018–19ನೇ ಶೈಕ್ಷಣಿಕ ಸಾಲಿನಲ್ಲಿ ಒಂದನೇ ಮತ್ತು ಎರಡನೇ ತರಗತಿಗಳಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನು ಬೋಧಿಸುತ್ತಿರುವ ಬಗ್ಗೆ ರಾಜ್ಯದ ಎಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಪರಿಶೀಲಿಸಿ ಖಚಿತಪಡಿಸಿಕೊಳ್ಳತಕ್ಕದ್ದು.

(ಡಾ|| ಪಿ.ಸಿ.ಜಾಫರ್, ಭಾ.ಆ.ಸೇ)
ಆಯುಕ್ತರು

ಗೆ:

1] ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪಠ್ಯಪುಸ್ತಕ ಸಂಘ, 100 ಅಡಿ ವರ್ತುಲ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ 3ನೇ ಹಂತ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
2] ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3] ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4] ಎಲ್ಲಾ ಶಾಲಾ ಮುಖ್ಯಸ್ಥರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ.

**ಪ್ರತಿಯನ್ನು:**

1] ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ರವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
2] ಕಛೇರಿ ಪ್ರತಿ.